# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

## ಕವಿಪ್ರನಿನಿ ಮತ್ತು ವಿಸಕಂಗಳ ನೂತನ ವ್ಯಾಖ್ಯಾನಿತ ಅಂಶದಾಯಿ ಕೊಡುಗೆ ಪಿಂಚಣಿ ಯೋಜನೆ ಘಟಕ

ಕವಿಪ್ರನಿನಿ/ಬಿ93/35989/2018-19/CYS- 12

ನಿಗಮ ಕಾರ್ಯಾಲಯ, ಕಾವೇರಿ ಭವನ,
ಬೆಂಗಳೂರು. ದಿನಾಂಕ: 12 MAY 2018

## ಸುತ್ತೋಲೆ

ವಿಷಯ: ನೂತನ ವ್ಯಾಖ್ಯಾನಿತ ಅಂಶದಾಯಿ ಕೊಡುಗೆ ಪಿಂಚಣಿ ಯೋಜನೆ ವ್ಯಾಪ್ತಿಯ ಕವಿಪ್ರನಿನಿ/ವಿಸಕಂಗಳ ನೌಕರರು/ಅಧಿಕಾರಿಗಳು ಅವರ ಖಾಯಂ ವಿಶ್ರಾಂತಿ ವೇತನ ಸಂಖ್ಯೆ(PPAN) ಖಾತೆಯಲ್ಲಿ ಜಮಾ ಇರುವ ಪಿಂಚಣಿ ವಂತಿಗೆಯ ವಿವರಗಳನ್ನು ಪಡೆದು ಪರಿಶೀಲಿಸಿಕೊಳ್ಳುವ ಬಗ್ಗೆ.

ಉಲ್ಲೇಖ: 1. ನಿಗಮದ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ93/35989/2016-17 ದಿನಾಂಕ:21.02.2017.

2. ನಿಗಮದ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ93/35989/2018-19/CYS-11 ದಿನಾಂಕ:08.05.2018.

*********

ಉಲ್ಲೇಖ 2ರ ಈ ಕಛೇರಿ ಸುತ್ತೋಲೆಯಲ್ಲಿ ನೂತನ ವ್ಯಾಖ್ಯಾನಿತ ಅಂಶದಾಯಿ ಕೊಡುಗೆ ಪಿಂಚಣಿ ಯೋಜನೆ ವ್ಯಾಪ್ತಿಯ ಕವಿಪ್ರನಿನಿ/ವಿಸಕಂಗಳ ಅಧಿಕಾರಿ/ನೌಕರರು ದಿನಾಂಕ:01.04.2006 ರಿಂದ 31.03.2018ರ ವರೆಗಿನ ಅವಧಿಯಲ್ಲಿ PPAN ಖಾತೆಯಲ್ಲಿ ಜಮಾ ಇರುವ ಪಿಂಚಣಿ ವಂತಿಗೆಯ ಪೂರ್ಣ ಮಾಹಿತಿಯನ್ನು ಕವಿಪ್ರನಿನಿ ಜಾಲತಾಣದ ಮುಖಪುಟದಲ್ಲಿ ಪ್ರಕಟಿಸಿರುವ ತಂತ್ರಾಂಶದಲ್ಲಿ ವೀಕ್ಷಿಸಲು ಅವಶ್ಯಕವಾದ ಸೂಚನೆಗಳನ್ನು ನೀಡಲಾಗಿತ್ತು. ಈ ಸಂಬಂಧ ಸದರಿ ಅಧಿಕಾರಿ/ನೌಕರರು ತಂತ್ರಾಂಶಕ್ಕೆ LOG-IN ಆಗಲು USER ID ಮತ್ತು PASSWORD ಗೆ ಮೀಸಲಾದ ಎರಡೂ ಜಾಗದಲ್ಲಿ ಅವರ PPAN ದಾಖಲಿಸುವಂತೆ ಸೂಚಿಸಲಾಗಿತ್ತು.

ಮುಂದುವರೆದು, ಉಲ್ಲೇಖ 1ರ ನಿಗಮದ ಆದೇಶದನ್ವಯ, ತಂತ್ರಾಂಶದಲ್ಲಿ NDCPS ಅಧಿಕಾರಿ/ನೌಕರರು ತಮಗೆ ನೀಡಿರುವ PASSWORD ಅನ್ನು ಬದಲಾಯಿಸಿಕೊಳ್ಳುವ ಅವಕಾಶ ಕಲ್ಪಿಸಲಾಗಿತ್ತು. ದಿನಾಂಕ:08.05.2018ರ ಸುತ್ತೋಲೆಯನ್ನು ಕವಿಪ್ರನಿನಿ ಜಾಲತಾಣದಲ್ಲಿ ಪ್ರಕಟಿಸಿದ ನಂತರ CHANGE IN PASSWORD ವಿಷಯವಾಗಿ **PASSWORD ಅನ್ನು ಬದಲಾವಣೆ ಮಾಡಿಕೊಂಡ ಅಧಿಕಾರಿ/ನೌಕರರು** ಈ ಕಛೇರಿಗೆ ಸತತವಾಗಿ ದೂರವಾಣಿ ಮುಖಾಂತರ ಸಂಪರ್ಕಿಸಿ, ತಮಗೆ ನೀಡಿರುವ PASSWORD ಅನ್ನು RESET ಮಾಡಿಕೊಡುವಂತೆ ಮನವಿ ಮಾಡುತ್ತಿದ್ದಾರೆ. ತಮಗೆ ನೀಡಿರುವ PASSWORD ಅನ್ನು ಬದಲಾವಣೆ ಮಾಡಿಕೊಂಡಿದ್ದಲ್ಲಿ ಆ PASSWORD ಅನ್ನು ಆಯಾ ಅಧಿಕಾರಿ/ನೌಕರರು ಕಡ್ಡಾಯವಾಗಿ ಗೌಪ್ಯತೆಯಿಂದ ಕಾಯ್ದಿಟ್ಟುಕೊಳ್ಳಬೇಕಿರುತ್ತದೆ ಮತ್ತು ಅದಕ್ಕೆ ಸಂಬಂಧಪಟ್ಟ ಅಧಿಕಾರಿ/ನೌಕರರೇ ಜವಾಬ್ದಾರರಾಗಿರುತ್ತಾರೆ. ತಪ್ಪಿದಲ್ಲಿ ಕೆಇಎನ್‌ಡಿಸಿಪಿಎಸ್ ಘಟಕವು PASSWORD ಅನ್ನು ತಿದ್ದುಪಡಿ ಮಾಡಲು ಸಾಧ್ಯವಾಗುವುದಿಲ್ಲವೆಂದು ತಿಳಿಯ ಪಡಿಸಲಾಗಿದೆ.

ಈ ಸುತ್ತೋಲೆಯನ್ನು ಲೆಕ್ಕ ಘಟಕ ಮತ್ತು ತಮ್ಮ ವ್ಯಾಪ್ತಿಯ ಇತರೆ ಕಛೇರಿಗಳ ಪ್ರಕಟನಾ ಫಲಕದಲ್ಲಿ ಪ್ರಚುರ ಪಡಿಸುವ ಜೊತೆಗೆ ಸಂಬಂಧಿಸಿದ ಎಲ್ಲಾ ನೌಕರರಿಗೆ ವಿಷಯ ತಿಳಿಸಲು ಸರ್ವ ಪ್ರಯತ್ನ ಮಾಡುವಂತೆ ಕೋರಿದೆ.

ಆರ್ಥಿಕ ಸಲಹೆಗಾರರು
(ಪಿಂಚಣಿ ಮತ್ತು ಉಪದಾನ ಟ್ರಸ್ಟ್)

ಪ್ರತಿಗಳು:

1. ವ್ಯವಸ್ಥಾಪಕ ನಿರ್ದೇಶಕರು, ಎಲ್ಲಾ ವಿಸಕಂಗಳು.
2. ಆರ್ಥಿಕ ಸಲಹೆಗಾರರು, ಕವಿಪ್ರನಿನಿ / ಎಲ್ಲಾ ವಿಸಕಂಗಳು.
3. ವ್ಯವಸ್ಥಾಪಕ ನಿರ್ದೇಶಕರು, ಕವಿಪ್ರನಿನಿ ರವರ ಆಪ್ತ ಕಾರ್ಯದರ್ಶಿ ರವರಿಗೆ, ವ್ಯವಸ್ಥಾಪಕ ನಿರ್ದೇಶಕರ ಗಮನಕ್ಕೆ ತರುವಂತೆ ಕೋರಲಾಗಿದೆ.

4. ವ್ಯವಸ್ಥಾಪಕ ನಿರ್ದೇಶಕರು, ಪಿ.ಸಿ.ಕೆ.ಎಲ್ ರವರ ಆಪ್ತ ಕಾರ್ಯದರ್ಶಿ ರವರಿಗೆ, ವ್ಯವಸ್ಥಾಪಕ ನಿರ್ದೇಶಕರ ಗಮನಕ್ಕೆ ತರುವಂತೆ ಕೋರಲಾಗಿದೆ.
5. ನಿರ್ದೇಶಕರು (ಹಣಕಾಸು), ನಿರ್ದೇಶಕರು (ಆ ಮತ್ತು ಮಾ.ಸಂ), ಕವಿಪ್ರನಿನಿ ರವರ ಆಪ್ತ ಕಾರ್ಯದರ್ಶಿ ರವರಿಗೆ, ನಿರ್ದೇಶಕರ ಗಮನಕ್ಕೆ ತರುವಂತೆ ಕೋರಲಾಗಿದೆ.

**ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ http:www.kptcl.com/eprasarana ವೆಬ್ ಸೈಟ್‌ನಲ್ಲಿ ಪ್ರಕಟಿಸಲಾಗಿದೆ.**

1. ಎಲ್ಲಾ ಮುಖ್ಯ ಇಂಜಿನಿಯರ್ ಕವಿಪ್ರನಿನಿ/ ಎಸ್ಕಾಂಗಳು
2. ಎಲ್ಲಾ ಅಧೀಕ್ಷಕ ಇಂಜಿನಿಯರ್/ ನಿಯಂತ್ರಣಾಧಿಕಾರಿ ಕವಿಪ್ರನಿನಿ / ಎಸ್ಕಾಂಗಳು
3. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್ / ಉಪ ನಿಯಂತ್ರಣಾಧಿಕಾರಿ ಕವಿಪ್ರನಿನಿ /ಎಸ್ಕಾಂಗಳು
4. ಎಲ್ಲಾ ಲೆಕ್ಕಾಧಿಕಾರಿಗಳು ಕವಿಪ್ರನಿನಿ /ಎಸ್ಕಾಂಗಳು
5. ಎಲ್ಲಾ ಲೆಕ್ಕಾಧಿಕಾರಿಗಳು (ಆಂತರಿಕ ತನಿಖೆ) ಕವಿಪ್ರನಿನಿ /ಎಸ್ಕಾಂಗಳು